**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ಇವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:**

**ವಿಷಯ:** ರಾಜ್ಯದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಸರ್ಕಾರಿ ಅಂಧ, ಶ್ರವಣನ್ಯೂನ್ಯತೆ ಮತ್ತು ಬುದ್ಧಿಮಾಂದ್ಯ ಮಕ್ಕಳ ವಿಶೇಷ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಥಮಿಕ ಶಾಲಾ ಸಹಾಯಕ ಶಿಕ್ಷಕರು, ದೈಹಿಕ ಶಿಕ್ಷಕರು, ಸಂಗೀತ ಶಿಕ್ಷಕರು ದರ್ಜೆ-3 ಮತ್ತು ಪ್ರೌಢಶಾಲೆಯ ಸಂಗೀತ ಶಿಕ್ಷಕರ ದರ್ಜೆ-2 ರ ಹುದ್ದೆಯ ಮೂಲವೇತನ ಶ್ರೇಣಿ ವ್ಯತ್ಯಾಸವಿರುವ ಬಗ್ಗೆ ಹಲವು ಬಾರಿ ಸರ್ಕಾರದ ಗಮನಕ್ಕೆ ತಂದಿದ್ದರೂ ಕೂಡ ಯಾವುದೇ ಕ್ರಮ ಕೈಗೊಂಡಿಲ್ಲ ಹಾಗೂ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳು 2004 ರಿಂದ ಇಲ್ಲಿಯವರೆಗೆ ಸಮಗ್ರವಾಗಿ ಪರಿಷ್ಕರಣೆ ಮಾಡವಂತೆಯೂ ಹಲವಾರು ಬಾರಿ ಮನವಿ ಮಾಡುತ್ತಾ ಬಂದಿದ್ದರೂ ಇಲ್ಲಿಯವರೆಗೂ ಪರಿಷ್ಕರಣೆಗೊಂಡಿರುವುದಿಲ್ಲ. ಇನ್ನೊಂದೆಡೆ ಇಲಾಖೆಯಲ್ಲಿನ ಕೆಲವು ವೃಂದದ ನೌಕರರಿಗೆ ಮುಂಬಡ್ತಿ ನೀಡಲು ಸರ್ಕಾರದ ಆದೇಶವಾಗಿದ್ದರೂ ಕೂಡ ಮುಂಬಡ್ತಿ ನೀಡಲು ಕೂಡ ವಿಳಂಬ ಮಾಡಲಾಗುತ್ತಿದೆ. ಇದರಿಂದಾಗಿ ಸರ್ಕಾರಿ ಅಂಧ. ಶ್ರವಣನ್ಯೂನ್ಯತೆ ಮತ್ತು ಬುದ್ಧಿಮಾಂದ್ಯ ಮಕ್ಕಳ ವಿಶೇಷ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಥಮಿಕ ಶಾಲಾ ಸಹಾಯಕ ಶಿಕ್ಷಕರು, ದೈಹಿಕ ಶಿಕ್ಷಕರು. ಸಂಗೀತ ಶಿಕ್ಷಕರು ಸಂಕಷ್ಟದಲ್ಲಿ ಸಿಲುಕಿದ್ದು ಈ ಬಗ್ಗೆ ಶೀಘ್ರವಾಗಿ ಕ್ರಮ ಕೈಗೊಂಡು ಅನುಕೂಲ ಮಾಡಿಕೊಡಬೇಕೆಂಬ ವಿಷಯ.

******

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಸರ್ಕಾರಿ ಅಂಧ ಮತ್ತು ಶ್ರವಣ ನ್ಯೂನತೆವುಳ್ಳ ಮಕ್ಕಳ ವಿಶೇಷ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಥಮಿಕ ಶಾಲಾ ಸಹಾಯಕ ಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರು, ಸಂಗೀತ ಶಿಕ್ಷಕರು ದರ್ಜೆ-3 ಮತ್ತು ಪ್ರೌಢಶಾಲೆಯ ಸಂಗೀತ ಶಿಕ್ಷಕರು ದರ್ಜೆ-2ರ ಹುದ್ದೆಯ ಮೂಲವೇತನ ಶ್ರೇಣಿ ವ್ಯತ್ಯಾಸವಿರುವುದು ಗಮನಕ್ಕೆ ಬಂದಿದ್ದು, ಈ ಸಂಬಂಧ ಸದರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳ ವೇತನ ಶ್ರೇಣಿಯಲ್ಲಿನ ವೇತನ ತಾರತಮ್ಯವನ್ನು ಸರಿಪಡಿಸಿ ಶಿಕ್ಷಣ ಇಲಾಖೆಯಲ್ಲಿರುವಂತೆ ನಿಯಮಾನುಸಾರ ವೇತನ ಶ್ರೇಣಿಯನ್ನು ತಿದ್ದುಪಡಿ ಮಾಡುವ ಸಂಬಂಧ ಸ್ವೀಕೃತವಾದ ಪ್ರಸ್ತಾವನೆಯಲ್ಲಿ ಆರ್ಥಿಕ ಪರಿಣಾಮ ಉಂಟಾಗುವುದರಿಂದ ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಿ ಕಡತವನ್ನು ಸಲ್ಲಿಸಲಾಗಿರುತ್ತದೆ.

ಇಲಾಖೆಯ ಪರಿಷ್ಕರಿಸಿದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಸೇವಾನಿಯಮಗಳು) ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನಾ ರಚನಾ ಇಲಾಖೆಗಳೊಂದಿಗೆ ಸಮಾಲೋಚಿಸಿ ಸಚಿವ ಸಂಪುಟದ ಅನುಮೋದನೆ ಪಡೆದು, ಅಂತಿಮವಾಗಿ ರಾಜ್ಯಪತ್ರದಲ್ಲಿ ಪ್ರಕಟಿಸಲಾಗುವುದು.

ಇಲಾಖೆಯಲ್ಲಿ ಚಾಲ್ತಿ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಗ್ರೂಪ್ ಬಿ, ಗ್ರೂಪ್ ಸಿ ಮತ್ತು ಗ್ರೂಪ್ ಡಿ ಹುದ್ದೆಗಳಲ್ಲಿನ ಅರ್ಹ ಸಿಬ್ಬಂದಿಗಳಿಗೆ ಮುಂಬಡ್ತಿ ನೀಡುವ ಸಂಬಂಧ ಅನುಮತಿ ನೀಡಲಾಗಿದ್ದು, ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳಲ್ಲಿ ಸಂವಿಧಾನದ ಅನುಚ್ಛೇದ 371ಜೆ ರಡಿ ಹೈದ್ರಾಬಾದ್ ಕರ್ನಾಟಕ ಸ್ಥಳೀಯ ವ್ಯಕ್ತಿಗಳಿಗೆ ಅನ್ವಯಿಸುವಂತೆ

ರಾಜ್ಯಮಟ್ಟದ ಹಾಗೂ ರಾಜ್ಯವ್ಯಾಪ್ತಿ ಸ್ಥಳೀಯ ವೃಂದದ ಹುದ್ದೆಗಳನ್ನು ಪರಿಷ್ಕರಿಸಿ ಕರಡು ಅಧಿಸೂಚನೆಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿದ್ದು, ಸದರಿ ಕರಡು ಅಧಿಸೂಚನೆಗೆ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಲಾಗುತ್ತಿದ್ದು, ಸದರಿ ಅಧಿಸೂಚನೆಯು ಅಂತಿಮಗೊಂಡು ರಾಜ್ಯಪತ್ರದಲ್ಲಿ ಪ್ರಕಟಗೊಂಡ ನಂತರ ಇಲಾಖೆಯಲ್ಲಿನ ಅರ್ಹ ಸಿಬ್ಬಂದಿಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನಿಯಮಾನುಸಾರ ಮುಂಬಡ್ತಿ ನೀಡಲು ಕ್ರಮವಹಿಸಲಾಗುವುದು.

**ಸಂಖ್ಯೆ:** ಮಮಇ 40 ಎಸ್‌ಜಿಡಿ 2026

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು